# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 881 |
| 2. | ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | : | 15.12.2025 |
| 4. | ಉತ್ತರಿಸಬೇಕಾದ ಸಚಿವರು | : | ವೈದ್ಯಕೀಯ ಶಿಕ್ಷಣ ಸಚಿವರು |

<table>
<tr><th>ಕ್ರ.<br>ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>(ಅ)</td><td>ಕಳೆದ 3 ವರ್ಷಗಳಲ್ಲಿ ಬೆಂಗಳೂರು ಕೇಂದ್ರ ಭಾಗದಲ್ಲಿರುವ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುವ ರೋಗಿಗಳ ಸಂಖ್ಯೆ ಎಷ್ಟು;</td><td>ಕಳೆದ ಮೂರು ವರ್ಷಗಳಲ್ಲಿ ಅಂದರೆ, 2022 ರಿಂದ 2024 ರ ಅವಧಿಯಲ್ಲಿ ಒಟ್ಟು 41,512 ಕ್ಯಾನ್ಸರ್ ರೋಗಿಗಳು ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ವಿವಿಧ ರೀತಿಯ ಕ್ಯಾನ್ಸರ್ ಚಿಕಿತ್ಸೆಗಳನ್ನು ಪಡೆದಿರುತ್ತಾರೆ. ಮುಖ್ಯವಾಗಿ ಶಸ್ತ್ರಚಿಕಿತ್ಸೆ, ವಿಕಿರಣ ಚಿಕಿತ್ಸೆ ಹಾಗೂ ಕಿಮೋಥೆರಪಿ ಅಥವಾ ಇವುಗಳ ಸಂಯೋಜಿತ ಚಿಕಿತ್ಸೆಯನ್ನು ಕ್ಯಾನ್ಸರ್ ವಿಧ ಅಥವಾ ಕ್ಯಾನ್ಸರ್ ಹಂತದ ಅನುಗುಣವಾಗಿ ನೀಡಲಾಗಿದೆ. 2022 ರಿಂದ 2024 ವರೆಗೆ 12781 ರೋಗಿಗಳು ಶಸ್ತ್ರ ಚಿಕಿತ್ಸೆಯನ್ನು, 14423 ರೋಗಿಗಳು ವಿಕಿರಣ ಚಿಕಿತ್ಸೆ ಹಾಗೂ 28370 ಕ್ಕೂ ಅಧಿಕ ರೋಗಿಗಳು ರಾಸಾಯನಿಕ (ಕಿಮೋಥೆರಪಿ) ಚಿಕಿತ್ಸೆಯನ್ನು ಪಡೆದಿರುತ್ತಾರೆ.<br><br>ಇದಲ್ಲದೆ 110 ಕ್ಕೂ ಅಧಿಕ ರೋಗಿಗಳಿಗೆ ದುಬಾರಿ ಚಿಕಿತ್ಸೆಯಾದ ಅಸ್ಥಿಮಜ್ಜೆ ಚಿಕಿತ್ಸೆಯನ್ನು ಉಚಿತವಾಗಿ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ 2022 ರಿಂದ 2024 ರವರೆಗೂ ನೀಡಲಾಗಿದೆ.<br><br>ಸಂಸ್ಥೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುವ ರೋಗಿಗಳ ಸಂಖ್ಯೆ:
<table>
<tr><th>ಚಿಕಿತ್ಸೆ ವಿಧಾನ</th><th>2022</th><th>2023</th><th>2024</th><th>2022 ರಿಂದ 2024</th><th>2025 ಅಕ್ಟೋಬರ್‌ವರೆಗೂ</th></tr>
<tr><td>ಪ್ರಮುಖ ಶಸ್ತ್ರ ಚಿಕಿತ್ಸೆ (Major Suregery)</td><td>3890</td><td>4299</td><td>4592</td><td>12781</td><td>3701</td></tr>
<tr><td>ವಿಕಿರಣ ಚಿಕಿತ್ಸೆ (Radiotherapy)</td><td>4734</td><td>4506</td><td>5183</td><td>14423</td><td>3976</td></tr>
<tr><td>ರಾಸಾಯನಿಕ ಚಿಕಿತ್ಸೆ (Chemotherapy)</td><td>8217</td><td>9801</td><td>10353</td><td>28371</td><td>9018</td></tr>
<tr><td>ನ್ಯೂಕ್ಲಿಯರ್ ಮೆಡಿಸಿನ</td><td>581</td><td>508</td><td>659</td><td>1748</td><td>490</td></tr>
<tr><td>ಅಸ್ಥಿ ಮಜ್ಜೆ (Bone Marrow)</td><td>19</td><td>40</td><td>52</td><td>111</td><td>24</td></tr>
</table>
</td></tr>
<tr><td>(ಆ)</td><td>ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.<br><br>ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು ಇಲ್ಲಿನ ಬೋಧಕ ವೃಂದದಲ್ಲಿ ಒಟ್ಟು 202 ಹುದ್ದೆಗಳು ಮಂಜೂರಾಗಿರುತ್ತವೆ. ಅದರಲ್ಲಿ 101 ಹುದ್ದೆಗಳಲ್ಲಿ ಖಾಯಂ ಆಗಿ ವೈದ್ಯರುಗಳು ಕಾರ್ಯನಿರ್ವಹಿಸುತ್ತಿದ್ದು, ಖಾಲಿ ಇರುವ 101 ಹುದ್ದೆಗಳಲ್ಲಿ ಗುತ್ತಿಗೆ/ಅಡಾಕ್ ಆಧಾರದ ಮೇಲೆ 52 ಹುದ್ದೆಗಳಲ್ಲಿ ವೈದ್ಯಾಧಿಕಾರಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.<br><br>ಮುಂದುವರೆದಂತೆ, ಸಂಸ್ಥೆಯಲ್ಲಿ ಬೋಧಕೇತರ ವೃಂದದಲ್ಲಿ 1,574</td></tr>
</table>

| | | |
|---|---|---|
| | | ಹುದ್ದೆಗಳು ಮಂಜೂರಾಗಿದ್ದು, ಖಾಯಂ ಆಗಿ ಪ್ರಸ್ತುತ 450 ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ರೋಗಿಗಳಿಗೆ ಗುಣಾತ್ಮಕವಾದ ಚಿಕಿತ್ಸೆಯನ್ನು ನೀಡಲು ಖಾಲಿ ಇರುವ ಹುದ್ದೆಗಳ ಎದುರಾಗಿ ಸುಮಾರು 1,200 ಹುದ್ದೆಗಳನ್ನು ಗುತ್ತಿಗೆ/ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದ್ದು, ರೋಗಿಗಳಿಗೆ ಚಿಕಿತ್ಸೆ ನೀಡಲು ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ. |
| (ಇ) | ಕಿದ್ವಾಯಿ ಆಸ್ಪತ್ರೆಗೆ ಇತರ ಜಿಲ್ಲೆಗಳಿಂದ ರೋಗಿಗಳನ್ನು ಕರೆತರುವುದು ಕಷ್ಟವಾಗುವುದರಿಂದ, ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪ್ರತ್ಯೇಕವಾಗಿ ಕ್ಯಾನ್ಸರ್ ಆಸ್ಪತ್ರೆಯನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯ ಸಹಯೋಗದೊಂದಿಗೆ ರಾಜ್ಯದ ಇನ್ನಿತರೆ ಜಿಲ್ಲೆಗಳಲ್ಲಿ ಕ್ಯಾನ್ಸರ್ ಕೇಂದ್ರಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ.<br><br>ಕಲ್ಬುರ್ಗಿಯಲ್ಲಿ ಪೆರಿಫೆರಲ್ ಕ್ಯಾನ್ಸರ್ ಕೇಂದ್ರವನ್ನು 1990ರಲ್ಲಿ ಸ್ಥಾಪಿಸಲಾಗಿದ್ದು, ಸದರಿ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಈಗಾಗಲೇ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದ್ದು, ಸಿವಿಲ್ ಕಾಮಗಾರಿಯು ಪ್ರಗತಿಯಲ್ಲಿದೆ.<br><br>ಇನ್ನುಳಿದಂತೆ, ಮೈಸೂರು, ತುಮಕೂರು, ಶಿವಮೊಗ್ಗ, ಬೆಳಗಾವಿ ಈ ಜಿಲ್ಲೆಗಳಲ್ಲಿ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.<br><br>ಅಲ್ಲದೆ, ರಾಯಚೂರಿನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಹಾಗೂ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ.<br><br>ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ, ಬಳ್ಳಾರಿ ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ಬಳ್ಳಾರಿ, ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ, ಈ ಸಂಸ್ಥೆಗಳಲ್ಲಿ ಕ್ಯಾನ್ಸರ್ ಚಿಕಿತ್ಸೆ ಸೌಲಭ್ಯವಿರುವ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.<br><br>ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ, ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ ಇಲ್ಲಿ ಶೀಘ್ರದಲ್ಲೇ ಚಿಕಿತ್ಸೆ ಪ್ರಾರಂಭಿಸಲು ಕ್ರಮವಹಿಸಲಾಗುವುದು.<br><br>ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿಯೂ ಡೇ ಕೇರ್ ಕೀಮೋಥೆರಪಿ ಕೇಂದ್ರಗಳನ್ನು ಸ್ಥಾಪಿಸಲೂ ಸಹ ಉದ್ದೇಶಿಸಲಾಗಿರುತ್ತದೆ. |
| (ಈ) | ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ವಾಹನ ನಿಲುಗಡೆ ನಿಗದಿಪಡಿಸಿರುವ ಶುಲ್ಕ ಎಷ್ಟು; ದಿನಂಪ್ರತಿ ಸಂಗ್ರಹವಾಗುವ ಒಟ್ಟು ಮೊತ್ತ ಎಷ್ಟು; ಸದರಿ ಗುತ್ತಿಗೆಯನ್ನು ಯಾವ ಸಂಸ್ಥೆಗೆ ನೀಡಲಾಗಿದೆ; | ಕಿದ್ವಾಯಿ ಸಂಸ್ಥೆಯಲ್ಲಿ ವಾಹನ ನಿಲುಗಡೆಗೆ ನಿಗದಿಪಡಿಸಿರುವ ಶುಲ್ಕ ಈ ಕೆಳಕಂಡಂತಿದೆ. |

| S. N | Timings | 4 Wheelers | Scooter/ Motor Cycle | Three Wheeler |
|---|---|---|---|---|
| 1 | Up to 2 Hours | 20 | 10 | 20 |
| 2 | Up to 2 Hours | 40 | 20 | 30 |
| 3 | Exceeding 6 Hours | 60 | 30 | 30 |

ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ವಾಹನ ನಿಲುಗಡೆ ಶುಲ್ಕದಿಂದ ದಿನಂಪ್ರತಿ ಸಂಗ್ರಹಿಸಲಾಗುವ ಅಂದಾಜು ಮೊತ್ತ ರೂ.2685.00 ಆಗಿರುತ್ತದೆ.

| | | |
|---|---|---|
| | | ಕಿದ್ವಾಯಿ ಸಂಸ್ಥೆಯಲ್ಲಿ ವಾಹನ ನಿಲುಗಡೆ ಟೆಂಡರ್ ಅನ್ನು ಶ್ರೀ ಶಿವಲಿಂಗಯ್ಯ, #44, 7 ನೇ ಕ್ರಾಸ್, ಆಜಾದ್ ನಗರ್, ಚಾಮರಾಜಪೇಟೆ, ಬೆಂಗಳೂರು 560 018 ರವರಿಗೆ ವಹಿಸಲಾಗಿತ್ತು ಹಾಗೂ ಗುತ್ತಿಗೆ ಅವಧಿಯು ದಿನಾಂಕ 07.06.2025 ರಂದು ಪೂರ್ಣಗೊಂಡಿರುತ್ತದೆ. ಗುತ್ತಿಗೆದಾರರಿಗೆ ದಿನಾಂಕ 08.06.2025 ರಿಂದ 07.09.2025 ರವರೆವಿಗೂ 03 ತಿಂಗಳ ಅವಧಿಗೆ ವಿಸ್ತರಿಸಲಾಗಿತ್ತು. ಸದರಿ ಅವಧಿ ಕೂಡ ಪೂರ್ಣಗೊಂಡಿರುತ್ತದೆ. ಹೊಸ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಪ್ರಸ್ತುತ ಸಂಸ್ಥೆಯಲ್ಲಿ ಪಾರ್ಕಿಂಗ್ ಶುಲ್ಕ ಸಂಗ್ರಹಿಸಲಾಗುತ್ತಿಲ್ಲ. |
| (ಉ) | ದೂರದ ಊರುಗಳಿಂದ ಬರುವ ರೋಗಿಗಳಿಗೆ ವಾಹನ ನಿಲುಗಡೆ ಶುಲ್ಕ ಹೊರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶುಲ್ಕ ವಿನಾಯಿತಿ ನೀಡುವುದರ ಕುರಿತು ಸರ್ಕಾರದ ನಿಲುವೇನು? | ದೂರದ ಊರುಗಳಿಂದ ಬರುವ ರೋಗಿಗಳಿಗೆ ವಿಧಿಸಲಾಗುತ್ತಿರುವ ವಾಹನ ನಿಲುಗಡೆ ಶುಲ್ಕಕ್ಕೆ ವಿನಾಯಿತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

**ಸಂಖ್ಯೆ:** ಎಂಇಡಿ 182 ಕೆಯುಎಂ 2025

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.